ಕರ್ನಾಟಕ ಸರಕಾರ

**ಉಪನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ ಕಲಬುರಗಿ**

ಸಂಖ್ಯೆ: ಆಪ್ರಶಾಖೆ/ಸಂಕೀರ್ಣ/ಶಾ.ರಜೆ.ಘೋ./2025-/01 ದಿನಾಂಕ:26/09/2025

**:ಜ್ಞಾಪನ:**

**ವಿಷಯ:-** ಕಲಬುರಗಿ ಜಿಲ್ಲೆಯಲ್ಲಿ ನಿರಂತರ ಮಳೆಯಾಗುತ್ತಿರುವುದರಿಂದ ಶಾಲೆಗಳಿಗೆ ರಜೆ ಘೋಷಿಸುವ ಕುರಿತು.

**ಉಲ್ಲೇಖ:-** ಮಾನ್ಯ ಜಿಲ್ಲಾಧಿಕಾರಿಗಳು ಕಲಬುರಗಿರವರ ಆದೇಶದಂತೆ.

&&&&&&&

ಪ್ರಸ್ತುತ ವಿಷಯಕ್ಕೆ ಸಂಬಂಧಿಸಿದಂತೆ, ಹವಾಮಾನ ಇಲಾಖೆಯು ಮುಂದಿನ 48 ಗಂಟೆಗಳ ಕಾಲ ಕಲಬುರಗಿ ಜಿಲ್ಲೆಯಾದ್ಯಂತ ಆರೆಂಜ್ ಅಲರ್ಟ್ ಘೋಷಿಸಲಾಗಿರುತ್ತದೆ. ಪ್ರಯುಕ್ತ ಜಿಲ್ಲೆಯಾದ್ಯಂತ ಭಾರಿ ಮಳೆಯಾಗುವ ಸಾಧ್ಯತೆ ಇರುವುದರಿಂದ, ಶಾಲೆಗಳಿಗೆ ಈಗಾಗಲೇ ದಸರಾ ರಜೆ ಇದ್ದು, ಜಿಲ್ಲೆಯ ಕೆಲವು ಶಾಲೆಗಳ ಆಡಳಿತ ಮಂಡಳಿಯವರು ದಸರಾ ರಜೆಯಿಂದ ವಿನಾಯತಿ ಪಡೆದುಕೊಂಡು ಶಾಲೆಗಳನ್ನು ನಡೆಸುತ್ತಿರುವ, ಸದರಿ ಶಾಲೆಗಳಿಗೆ ಮುಂಜಾಗ್ರತ ಕ್ರಮವಾಗಿ ಮತ್ತು ಮಕ್ಕಳ ಸುರಕ್ಷತೆಯ ಹಿತದೃಷ್ಠಿಯಿಂದ, ದಿನಾಂಕ: 27-09-2025 ಮತ್ತು 28-09-2025ರಂದು ಎರಡು ದಿನಗಳ ಕಾಲ ರಜೆ ಘೋಷಿಸಿ ಆದೇಶಿಸಿದೆ. ಸದರಿ ರಜಾ ಅವಧಿಯ ಪಾಠ ಬೋಧನೆಯನ್ನು ಮುಂದಿನ ರಜಾ ದಿನಗಳಂದು ಸರಿದೂಗಿಸಲು ಸೂಚಿಸಿದೆ.

ಉಪನಿರ್ದೇಶಕರು (ಆಡಳಿತ)
ಶಾಲಾ ಶಿಕ್ಷಣ ಇಲಾಖೆ ಕಲಬುರಗಿ

ಗೆ,
ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು
ಹಾಗೂ ಸಂಬಂಧಿಸಿದ ಶಾಲಾ ಮುಖ್ಯಸ್ಥರುಗಳಿಗೆ

ಪ್ರತಿಗಳು

1. ಮಾನ್ಯ ಜಿಲ್ಲಾಧಿಕಾರಿಗಳು, ಕಲಬುರಗಿ ರವರ, ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ ಕಲಬುರಗಿ ರವರ, ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಕಲಬುರಗಿ ರವರ, ದಯಾಪರ ಮಾಹಿತಿಗಾಗಿ ಸಲ್ಲಿಸಿದೆ.
4. ಸಂಬಂಧಿಸಿದ ಶಾಲಾ ಆಡಳಿತ ಮಂಡಳಿಯವರಿಗೆ, (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ) ಸೂಕ್ತ ಕ್ರಮಕ್ಕಾಗಿ
5. ಕಛೇರಿ ಪ್ರತಿ.

Scanned with OKEN Scanner